# ಕರ್ನಾಟಕ ಸರ್ಕಾರ

ಗ್ರಾಅಪ 225 ಗ್ರಾಪಂಅ 2020

ಕರ್ನಾಟಕದ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು. ದಿನಾಂಕ:02-03-2020

## ಸುತ್ತೋಲೆ

**ವಿಷಯ:** ಅಂತರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಗ್ರಾಮ ಪಂಚಾಯಿತಿ ಹಂತದಲ್ಲಿ ಮಹಿಳೆಯರಿಗಾಗಿ ವಿಶೇಷ ಗ್ರಾಮ ಸಭೆಯನ್ನು ಆಯೋಜಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 225 ಗ್ರಾಪಂಅ 2020, ದಿನಾಂಕ: 28-02-2020

******

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿಗಳು ಸ್ಥಳೀಯ ಸ್ವಯಂ ಸರ್ಕಾರವಾಗಿದ್ದು, ಗ್ರಾಮ ಸಭೆಗಳು ಗ್ರಾಮದ ವಿಧಾನ ಸಭೆಯಾಗಿ ಕಾರ್ಯನಿರ್ವಹಿಸುತ್ತಿವೆ. ಗ್ರಾಮದ ಮತದಾರರ ಹಾಗೂ ನಾಗರೀಕರ ಅಗತ್ಯತೆಗಳನ್ನು ಮತ್ತು ಅವಶ್ಯಕತೆಗಳನ್ನು ಆಲಿಸುವ ಮತ್ತು ಸೌಕರ್ಯಗಳನ್ನು ಒದಗಿಸುವ ಸರ್ಕಾರವಾಗಿದೆ. ಗ್ರಾಮದ ಸರಿಸುಮಾರು ಅರ್ಧದಷ್ಟು ಜನಸಂಖ್ಯೆಯನ್ನು ಪ್ರತಿನಿಧಿಸುವ ಮಹಿಳೆಯರು ಸಾಮಾಜಿಕ ಕಟ್ಟುಪಾಡುಗಳಿಂದಾಗಿ ಸಾಮಾನ್ಯ ಗ್ರಾಮ ಸಭೆಗಳಲ್ಲಿ ಕಡಿಮೆ ಸಂಖ್ಯೆಗಳಲ್ಲಿ ಭಾಗವಹಿಸುತ್ತಿದ್ದು, ಮಹಿಳೆಯರ ಅಗತ್ಯತೆಗಳು ಮತ್ತು ಬೇಡಿಕೆಗಳು ನಿರೀಕ್ಷಿತ ಪ್ರಾಮುಖ್ಯತೆಯನ್ನು ಪಡೆದುಕೊಂಡಿರುವುದಿಲ್ಲ. ಇದರ ಪರಿಣಾಮವಾಗಿ ಮಹಿಳೆಯರು ಸ್ಥಳೀಯ ಸರ್ಕಾರದ ನಿರ್ಣಯಗಳಲ್ಲಿ ಪರಿಣಾಮಕಾರಿಯಾಗಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ ಎಂಬ ಅಭಿಪ್ರಾಯವಿದೆ. ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನವಾದ ಮಾರ್ಚ್ 08ನ್ನು ವಿಶೇಷವಾಗಿ ಆಚರಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯು ಮಹಿಳೆಯರಿಗಾಗಿ ವಿಶೇಷ ಗ್ರಾಮಸಭೆಗಳನ್ನು ಆಯೋಜಿಸಲು ತಿಳಿಸಲಾಗಿದೆ.

ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ "ಪೋಷಣ್ ಪಕ್ವಾಡ" ಗಳನ್ನು ಆಯೋಜಿಸುವಂತೆ ಸೂಚಿಸಿದೆ ಹಾಗೂ ಈ ಸಂದರ್ಭದಲ್ಲಿ ಪೋಷಣ್ ಅಭಿಯಾನದಡಿ ಮಹಿಳೆಯರಿಗಾಗಿ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸಿ ಗ್ರಾಮೀಣ ಪ್ರದೇಶಗಳಲ್ಲಿ ಗರ್ಭಿಣಿ ಮಹಿಳೆಯರನ್ನು ಗುರುತಿಸುವುದು, ಗ್ರಾಮೀಣ ಪ್ರದೇಶಗಳಲ್ಲಿನ ವಿವಿಧ ಆಹಾರ ಪದ್ಧತಿಯಡಿಯಲ್ಲಿ ಸ್ಥಳೀಯವಾಗಿ ಲಭ್ಯವಿರುವ ಪೌಷ್ಠಿಕ ಆಹಾರಗಳನ್ನು ಗುರುತಿಸುವುದು, ಅಂಗನವಾಡಿ ಕೇಂದ್ರಗಳಲ್ಲಿ ವಿವವಿಧ ಫಲಾನುಭವಿಗಳಿಗೆ ವಿತರಿಸಲು ಲಭ್ಯವಿರುವ ಪೂರಕ ಪೌಷ್ಠಿಕ ಆಹಾರ ಇತ್ಯಾದಿ ವಿಷಯಗಳ ಬಗ್ಗೆ "ಪೋಷಣ್ ಪಕ್ವಾಡ" ಅಡಿಯಲ್ಲಿ ಆಯೋಜಿಸಲಾಗುವ ವಿಶೇಷ ಮಹಿಳಾ ಗ್ರಾಮ ಸಭೆಗಳಲ್ಲಿ ಚರ್ಚಿಸುವಂತೆ ಸೂಚಿಸಿದೆ.

ಮೇಲ್ಕಂಡ ವಿಷಯಗಳೊಂದಿಗೆ ಮಹಿಳೆಯರಿಗಾಗಿ ಸರ್ಕಾರವು ಕಾರ್ಯರೂಪಕ್ಕೆ ತಂದಿರುವ ಪೋಷಣ್ ಅಭಿಯಾನದಡಿ ಮಹಿಳೆಯರ ಆರೋಗ್ಯ ಮತ್ತು ಪೌಷ್ಠಿಕ ವಿಚಾರಗಳಿಗೆ ಸಂಬಂಧಿಸಿದಂತೆ ಮಹಿಳೆಯರಿಗಾಗಿ ವಿಶೇಷ ಗ್ರಾಮಸಭೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದು, ಕಾರ್ಯಕ್ರಮದ ವಿವರಗಳನ್ನು ನೀಡುವುದು.

ಮುಂದುವರೆದು, ವಿಶೇಷವಾಗಿ 1) ಮಾತೃಪೂರ್ಣ, ಮಾತೃವಂದನಾ ಮತ್ತು ಮಾತೃಶ್ರೀ ಕಾರ್ಯಕ್ರಮಗಳು 2) ಬಾಲ್ಯವಿವಾಹ, ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಅದರ ತಿದ್ದುಪಡಿಗಳು 3) ಹೆಣ್ಣುಮಕ್ಕಳು ಅವಶ್ಯಕವಾಗಿ ಪ್ರೌಢ ಶಿಕ್ಷಣದವರೆಗೆ ಪೂರ್ಣವಾಗಿ ವ್ಯಾಸಂಗ ಮಾಡಲು ಮನವೊಲಿಸುವುದು ಹಾಗೂ ಸ್ಥಳೀಯವಾಗಿ ಸಮಸ್ಯೆಗಳು ಕಂಡುಬಂದಲ್ಲಿ ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು. ಇದಕ್ಕೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹಿತಿಯನ್ನು ಹಂಚಿಕೊಳ್ಳಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.

(ರಾಕೇಶ್ ಸಿಂಗ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪನಿರ್ದೇಶಕರುಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.
5) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.